## ವಿದ್ಯಾರ್ಥಿಗಳ ಹಿತವೇ ಮುಖ್ಯ | ಸಚಿವ ಡಾ.ಅಶ್ವತ್ಥನಾರಾಯಣ ಹೇಳಿಕೆ

# 23ಕ್ಕೆ ರಾಷ್ಟ್ರೀಯ ಶಿಕ್ಷಣ ನೀತಿ ಜಾರಿ

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು

ವಿದ್ಯಾರ್ಥಿಗಳ ಹಿತವನ್ನೇ ಗುರಿಯಾಗಿಟ್ಟುಕೊಂಡಿರುವ 'ರಾಷ್ಟೀಯ ಶಿಕ್ಷಣ ನೀತಿ'ಯಡಿ ಕಲಿಕೆಗೆ 23ರಿಂದ ವಿದ್ಯಾರ್ಥಿಗಳ ಪ್ರವೇಶ ಪ್ರಕ್ರಿಯೆ ಆರಂಭಿಸಲಾಗುವುದು ಎಂದು ಉನ್ನತ ಶಿಕ್ಷಣ ಸಚಿವ ಡಾ. ಸಿ.ಎನ್. ಅಶ್ವತ್ಥನಾರಾಯಣ ಪ್ರಕಟಿಸಿದ್ದಾರೆ.

ಬೆಂಗಳೂರು ಉತ್ತರ ವಿಶ್ವವಿದ್ಯಾಲಯ ಹಾಗೂ ಕ್ರಿಸ್ತು ಜಯಂತಿ ಕಾಲೇಜು ಸಹಯೋಗದಲ್ಲಿ ಬುಧವಾರ ಹಮ್ಮಿಕೊಂಡಿದ್ದ 'ರಾಷ್ಟೀಯ ಶಿಕ್ಷಣ ನೀತಿ-2020' ರಾಷ್ಟೀಯ ವಿಚಾರ ಸಂಕಿರಣ ಉದ್ಘಾಟಿಸಿ ಮಾತನಾಡಿದರು. ಪ್ರವೇಶ ಪ್ರಕ್ರಿಯೆಗೆ ಕೇಂದ್ರದ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಹಾಗೂ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಚಾಲನೆ ನೀಡುವರು ಎಂದರು.



**ವಿರೋಧ ಸರಿಯಲ್ಲ:** ಶಿಕ್ಷಣ ನೀತಿಯನ್ನು ಆಮೂಲಾಗ್ರವಾಗಿ ಅಧ್ಯಯನ ಮಾಡದೆ ಅಥವಾ ಅದನ್ನು ಸರಿಯಾಗಿ ಗ್ರಹಿಸದೆ ಟೀಕೆ ಮಾಡುವುದು ಸರಿಯಲ್ಲ. ಶಿಕ್ಷಣ ನೀತಿಯನ್ನು ವಿರೋಧ ಮಾಡುವುದೂ ದೇಶದ ಅಭಿವೃದ್ಧಿಯನ್ನು ವಿರೋಧಿಸುವುದು ಎರಡೂ ಒಂದೇ ಎಂದು ಅಭಿಪ್ರಾಯಪಟ್ಟರು.

ವಿಶಾಲ ತಳಹದಿ ಹಾಗೂ ದೃಷ್ಟಿಕೋನದಿಂದ ರೂಪಿತವಾಗಿರುವ ಶಿಕ್ಷಣ ನೀತಿಯಲ್ಲಿ ಬಹು ಆಯ್ಕೆಯ ಕಲಿಕೆಗೆ ವಿಪುಲ ಅವಕಾಶಗಳಿವೆ. ಇಷ್ಟು ದಿನ ನಾವು ಹೇಳಿದ್ದನ್ನು ವಿದ್ಯಾರ್ಥಿಗಳು ಕಲಿಯುತ್ತಿದ್ದರು. ಮಕ್ಕಳ ಪರಿಪೂರ್ಣ ವಿಕಾಸಕ್ಕೆ ಅವಕಾಶ ಇರಲಿಲ್ಲ. ಇನ್ನುಮುಂದೆ ಅವರ ಇಚ್ಛೆಯ ವಿಷಯ ಕಲಿಯಲಿದ್ದಾರೆ. ಸಾಮಾಜಿಕವಾಗಿ, ಆರ್ಥಿಕವಾಗಿ ಹಾಗೂ ಇತರೆ ಯಾವುದೇ ಕ್ಷೇತ್ರವೇ ಇರಲಿ, ದೇಶ ಎದುರಿಸುತ್ತಿರುವ ಪ್ರತಿಯೊಂದು ಸವಾಲಿಗೂ ಶಿಕ್ಷಣ ನೀತಿಯಲ್ಲಿ ಉತ್ತರವಿದೆ ಎಂದು ಸ್ಪಷ್ಟಪಡಿಸಿದರು.

ಯಾವುದೇ ದೇಶ, ಯಾವುದೇ ಹಂತದಲ್ಲಿ ಹಾಗೂ ಯಾವುದೇ ಸಮಸ್ಯೆ ಎದುರಿಸುತ್ತಿದ್ದರೂ ನಿರಾಯಾಸವಾಗಿ ಬಗೆಹರಿಸುವ ಶಕ್ತಿ ಶಿಕ್ಷಣಕ್ಕೆ ಮಾತ್ರ ಇದೆ ಎಂಬುದು ನನ್ನ ಅಚಲ ನಂಬಿಕೆ. ಆಮೂಲಾಗ್ರ ಮತ್ತು ರಚನಾತ್ಮಕ ಪ್ರಗತಿ ಸಾಧಿಸಬೇಕಿದ್ದರೆ ಶಿಕ್ಷಣಕ್ಕೆ ಒತ್ತು ನೀಡಲೇಬೇಕು. ಈ ನಿಟ್ಟಿನಲ್ಲಿ ಜರ್ಮನಿ, ದಕ್ಷಿಣ ಕೊರಿಯಾ, ಜಪಾನ್‌ನಂಥ ಚಿಕ್ಕ ಚಿಕ್ಕ ದೇಶಗಳು ಅದ್ಭುತಗಳನ್ನೇ ಸೃಷ್ಟಿ ಮಾಡಿವೆ ಎಂದರು. ಶಿಕ್ಷಣ ನೀತಿ ಜಾರಿ ದಿಕ್ಕಿನಲ್ಲಿ ಇಂಥ ವಿಚಾರಸಂಕಿರಣ ಆಯೋಜಿಸಿದ ಬೆಂಗಳೂರು ಉತ್ತರ ವಿಶ್ವವಿದ್ಯಾಲಯದ ಬಗ್ಗೆ ಅಶ್ವತ್ಥನಾರಾಯಣ ಮೆಚ್ಚುಗೆ ವ್ಯಕ್ತಪಡಿಸಿದರು.

ಕ್ರಿಸ್ತು ಜಯಂತಿ ಕಾಲೇಜಿನ ಪ್ರಾಂಶುಪಾಲ ಫಾದರ್ ಡಾ. ಅಗಸ್ಟಿನ್ ಜಾರ್ಜ್, ಕಾಲೇಜು ಶಿಕ್ಷಣ ಇಲಾಖೆ ಆಯುಕ್ತ ಪಿ. ಪ್ರದೀಪ್, ಬೆಂಗಳೂರು ಉತ್ತರ ವಿವಿ ಕುಲಪತಿ ಪ್ರೊ. ಡಿ. ಕುಮುದಾ, ರಾಜ್ಯ ಉನ್ನತ ಶಿಕ್ಷಣ ಪರಿಷತ್ ಉಪಾಧ್ಯಕ್ಷ ಪ್ರೊ. ತಿಮ್ಮೇಗೌಡ ಮಾತನಾಡಿದರು. ವಿವಿ ರಿಜಿಸ್ಟ್ರಾರ್ ಡಾ. ವಿ. ವೆಂಕಟೇಶಮೂರ್ತಿ, ಕ್ರಿಸ್ತು ಜಯಂತಿ ಕಾಲೇಜಿನ ಡೀನ್ ಡಾ. ಜೆ. ಅಲೋಶಿಯಸ್ ಎಡ್ವರ್ಡ್ ಇತರರಿದ್ದರು.

ಲಿಂಗಾಯತ ಮ್ಯಾಟ್ರಿಮೋನಿ.ಕಾಮ್
From Matrimony.com Group
ವಿಶೇಷ ವೈವಾಹಿಕ ಸೇವೆ ಲಿಂಗಾಯತರಿಗೆ
ನೋಂದಣಿ ಉಚಿತ!
ನಮಗೆ ಕರೆ ಮಾಡಿ 75388 06555

### ಸವಾಲು ಗೆಲ್ಲಲು ಶಿಕ್ಷಣದಿಂದಷ್ಟೇ ಸಾಧ್ಯ

ಶಿಕ್ಷಣ ಸಂಸ್ಥೆಗಳನ್ನು ಅತ್ಯುತ್ತಮವಾಗಿ ರೂಪಿಸಬೇಕು. ವಿದ್ಯಾರ್ಥಿಕೇಂದ್ರಿತ ವ್ಯವಸ್ಥೆ ಅಲ್ಲಿರಬೇಕು. ಮುಂದಿನ ಅನೇಕ ವರ್ಷಗಳ ಮುನ್ನೋಟ ಇಟ್ಟುಕೊಂಡು ಸಂಸ್ಥೆಗಳನ್ನು ಕಟ್ಟಿ ಬೆಳೆಸಬೇಕು. ಅದಕ್ಕಾಗಿ ಸಮಾಜದ ಪ್ರತಿಯೊಬ್ಬರೂ ಕೈಜೋಡಿಸಬೇಕು. ಇಂಥ ಸಂಸ್ಥೆಗಳನ್ನು ಆಮೂಲಾಗ್ರವಾಗಿ ಬೆಳೆಸಲು ನೆರವಾಗಬೇಕು. ಯಾವುದೇ ಶಿಕ್ಷಣ ಸಂಸ್ಥೆಯೂ ಲಾಭ ಗಳಿಕೆಗಾಗಿ ಕೆಲಸ ಮಾಡಿಲ್ಲ, ಮಾಡುವುದೂ ಇಲ್ಲ ಎಂದು ಡಾ.ಅಶ್ವತ್ಥನಾರಾಯಣ ಹೇಳಿದರು. ನಮ್ಮ ದೇಶದ ಜನಸಂಖ್ಯೆ ಈಗ 130 ಕೋಟಿ ಮೀರುತ್ತಿದೆ. ಅದೇ ಪ್ರಮಾಣದಲ್ಲಿ ಸವಾಲುಗಳು, ಅಗತ್ಯಗಳು ಹೆಚ್ಚುತ್ತಿವೆ. ಇವೆಲ್ಲವನ್ನೂ ಎದುರಿಸಿ ಗೆಲ್ಲಬೇಕಾದರೆ ನಮಗಿರುವ ಏಕೈಕ ಸಾಧನ ಶಿಕ್ಷಣ ಮಾತ್ರ ಎಂದರು.